ಪಿ.ಸಿ.ಆರ್ ಸಂಖ್ಯೆ : 104/2026
ಪಿ.ಡಬ್ಲೂ : 01

**ದಿನಾಂಕಃ 18-06-2026 ರಂದು** ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.

**: ಸಾಕ್ಷಿಯ ಪ್ರಮಾಣೀಕೃತ ಹೇಳಿಕೆ :**

ನಾನು ಈ ಕೇಸಿನಲ್ಲಿ ಪಿರ್ಯಾದಿಯಾಗಿದ್ದು, ನಾನು ನನ್ನ ಪ್ರಮಾಣಪತ್ರವನ್ನು ಈ ನ್ಯಾಯಾಲಯಕ್ಕೆ ಸಲ್ಲಿಸಿರುತ್ತೇನೆ, ಅದನ್ನು ನನ್ನ ಹೇಳಿಕೆ ಮೇರೆಗೆ ಬೆರಳಚ್ಚು ಮಾಡಲಾಗಿದೆ. ಅದರಲ್ಲಿರುವ ವಿಷಯಗಳೆಲ್ಲ ನನ್ನ ತಿಳುವಳಿಕೆ ಮಟ್ಟಿಗೆ ಸತ್ಯವಾಗಿರುತ್ತದೆ ಹಾಗೂ ಅದರಲ್ಲಿರುವ ಸಹಿ ನನ್ನದಾಗಿರುತ್ತದೆ, ಅದನ್ನು ನನ್ನ ಪ್ರಮಾಣೀಕೃತ ಹೇಳಿಕೆಯನ್ನಾಗಿ ಪರಿಗಣಿಸಬೇಕಾಗಿ ಕೇಳಿಕೊಳ್ಳುತ್ತೇನೆ. ನಾನು ಈ ಕೆಳಕಂಡ ದಾಖಲಾತಿಗಳನ್ನು ನ್ಯಾಯಾಲಯಕ್ಕೆ ಹಾಜರು ಪಡಿಸಿರುತ್ತೇನೆ.

1. ಆರೋಪಿ ನನಗೆ ನೀಡಿರುವ ಚೆಕ್ಕನ್ನು ಹಾಜರು ಪಡಿಸಿದ್ದು, ಅದನ್ನು ನಿಸಿ-1 ಎಂದು ಗುರುತಿಸಲಾಯಿತು.

2. ಚೆಕ್ ಅಮಾನ್ಯಗೊಂಡ ಬಗ್ಗೆ ಬ್ಯಾಂಕಿನವರು ನೀಡಿದ ಮೆಮೋವನ್ನು ಹಾಜರು ಪಡಿಸಿದ್ದು, ಅದನ್ನು ನಿಸಿ-2 ಎಂದು ಗುರುತಿಸಲಾಯಿತು.

3. ಆರೋಪಿಗೆ ವಕೀಲರ ಮುಖಾಂತರ ಕಳುಹಿಸಿದ ನೋಟಿಸಿನ ಕಚೇರಿ ಪ್ರತಿಯನ್ನು ಹಾಜರು ಪಡಿಸಿದ್ದು, ಅದನ್ನು ನಿಸಿ-3 ಎಂದು ಗುರುತಿಸಲಾಯಿತು.

4. ಸದರಿ ನೋಟಿಸು ಆರೋಪಿತನಿಗೆ ಕಳುಹಿಸಿದ ಬಗ್ಗೆ ಮೂರು ಅಂಚೆ ರಸೀದಿಯನ್ನು ಹಾಜರು ಪಡಿಸಿದ್ದು, ಅವುಗಳನ್ನು ನಿಪಿ-4 ರಿಂದ ನಿಸಿ-6 ಎಂದು ಗುರುತಿಸಲಾಯಿತು.

5. ಸದರಿ ನೋಟಿಸು ಆರೋಪಿತನಿಗೆ ಜಾರಿಯಾಗದೇ ವಾಪಸ್ಸು ಬಂದಿರುವ ಎರಡು ಅಂಚೆ ಲಕೋಟೆಯನ್ನು ಹಾಜರು ಪಡಿಸಿದ್ದು, ಅದನ್ನು ನಿಸಿ-7 ಮತ್ತು ನಿಸಿ-8 ಎಂದು ಗುರುತಿಸಲಾಯಿತು.

6. ದೂರಿನಲ್ಲಿ ಪಿರ್ಯಾದಿ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು, ಅದನ್ನು ನಿಸಿ-8 ಹಾಗೂ ನಿಪಿ-8(ಎ) ಎಂದು ಗುರುತಿಸಲಾಯಿತು.

**ಆರೋಪಿತನ ವಿರುದ್ದ ಕಾನೂನು ಕ್ರಮ ಕೈಗೊಳ್ಳಲು ಪ್ರಾರ್ಥನೆ.**

( ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದ ಮೇರೆಗೆ ಬೆರಳಚ್ಚು ಮಾಡಲಾಯಿತು )

ಓ. ಹೇ. ಕೇ. ಸ. ಎಂ. ಒ.        ನನ್ನ ಸಮಕ್ಷಮ,

ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ.
ನ್ಯಾಯಾಲಯ, ಮಾಗಡಿ.